ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2018–19 ದಿನಾಂಕ: 18–02–2019

## ಪತ್ರಿಕಾ ಆಮಂತ್ರಣ

1. **ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ "ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ" ಕಾರ್ಯಕ್ರಮ :**

**ದಿವ್ಯ ಸಾನಿಧ್ಯ:**

ಪ. ಪೂ. ಶ್ರೀ ಮಂಜುನಾಥಸ್ವಾಮೀಜಿ

ಶ್ರೀ ಗೋಸಾಯಿ ಮಹಾಸಂಸ್ಥಾನಮಠ, ಶ್ರೀ ಭವಾನಿಪೀಠ, ಬೆಂಗಳೂರು.

**ಗೌರವ ಉಪಸ್ಥಿತಿ:**

ಡಾ. ಜಿ. ಪರಮೇಶ್ವರ್

ಉಪಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

**ಉದ್ಘಾಟನೆ:**

ಡಿ.ಕೆ. ಶಿವಕುಮಾರ್,

ಜಲಸಂಪನ್ಮೂಲ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು.

**ಮುಖ್ಯ ಅತಿಥಿಗಳು:**

ಶ್ರೀಮತಿ ಗಂಗಾಂಬಿಕೆ ಮಲ್ಲಿಕಾರ್ಜನ,

ಮಹಾಪೌರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಅಧ್ಯಕ್ಷತೆ:**

ಉದಯ್ ಬಿ. ಗರುಡಾಚಾರ್,

ಶಾಸಕರು, ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ,

ದಿನಾಂಕ: 19–02–2019, ಮಂಗಳವಾರ ಸಮಯ: ಬೆಳಿಗ್ಗೆ 11.00 ಗಂಟೆಗೆ

ಸ್ಥಳ: ರವೀಂದ್ರ ಕಲಾಕ್ಷೇತ್ರ, ಜೆ.ಸಿ. ರಸ್ತೆ, ಬೆಂಗಳೂರು.

## ಪತ್ರಿಕಾ ಪ್ರಕಟಣೆ

## ಕಾಗದದ ಚಟುವಟಿಕೆಗಳಲ್ಲಿ ಖಗೋಳ ಶಾಸ್ತ್ರ

ಬೆಂಗಳೂರು, ಫೆಬ್ರವರಿ 18 (ಕರ್ನಾಟಕ ವಾರ್ತೆ)

ಜವಾಹರ್ ಲಾಲ್ ನೆಹರು ತಾರಾಲಯ ಹಾಗೂ ಬೆಂಗಳೂರು ಅಸೋಸಿಯೇಷನ್ ಫಾರ್ ಸೈನ್ಸ್ ಎಜುಕೇಶನ್ ಸಹಯೋಗದೊಂದಿಗೆ ಫೆಬ್ರವರಿ 28, 2019 ರಂದು ಜವಾಹರ್‌ಲಾಲ್ ನೆಹರು ತಾರಾಲಯ ರಾಷ್ಟ್ರೀಯ, ಹೈಗ್ರೌಂಡ್ಸ್, ಬೆಂಗಳೂರು ಇಲ್ಲಿ ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 3.30 ಗಂಟೆಯವರೆಗೆ ವಿಜ್ಞಾನ ದಿನಾಚರಣೆಯ ಅಂಗವಾಗಿ ಸಾರ್ವಜನಿಕರಿಗಾಗಿ ಒಂದು ದಿನದ ಕಾರ್ಯಾಗಾರವನ್ನು ಆಯೋಜಿಸಿದೆ. ಬಾಹ್ಯಾಕಾಶ ವಿಜ್ಞಾನದಲ್ಲಿ ಒರಿಗಾಮಿಯ ಉಪಯೋಗ ಮತ್ತು ಖಗೋಳ ಶಾಸ್ತ್ರದ ವಿಷಯಗಳನ್ನು ಕಾಗದದ ಚಟುವಟಿಕೆಗಳ ಮೂಲಕ ಚರ್ಚಿಸುವುದು ಸರ್ಕಾರದ ಧ್ಯೇಯವಾಗಿದೆ.

ಈ ಕಾರ್ಯಾಗಾರವು 8 ನೇ ತರಗತಿಯ ಮೇಲ್ಪಟ್ಟ ವಿದ್ಯಾರ್ಥಿಗಳಿಗಾಗಿದ್ದು, 40 ಅಭ್ಯರ್ಥಿಗಳಿಗೆ ಭಾಗವಹಿಸುವ ಅವಕಾಶವಿದೆ.

ಭಾಗವಹಿಸುವ ವಿದ್ಯಾರ್ಥಿಗಳು ಕಚೇರಿಯ ದೂರವಾಣಿ ಮುಖೇನ ಅಥವಾ ಮಿಂಚಂಚೆ info@taralaya.org ಮೂಲಕ ನೋಂದಾಯಿಸಿದವರು ಮಾತ್ರ ಪಾಲ್ಗೊಳ್ಳಬಹುದು. ಮೊದಲು ಬಂದವರಿಗೆ ಮೊದಲ ಆದ್ಯತೆ ನೀಡಲಾಗುವುದು.

ಹೆಚ್ಚಿನ ವಿವರಗಳಿಗೆ ದೂರವಾಣಿ – 22379725 ಅಥವಾ http://www.taralaya.org/announcements.php ಅನ್ನು ಸಂಪರ್ಕಿಸಬಹುದಾಗಿದೆ ಎಂದು ಜವಾಹರ್ ಲಾಲ್ ನೆಹರು ತಾರಾಲಯದ ಪ್ರಕಟಣೆ ತಿಳಿಸಿದೆ.

## ಫೆಬ್ರವರಿ 23 ರಂದು "ಉದ್ಯೋಗ ಮೇಳ"

ಬೆಂಗಳೂರು, ಫೆಬ್ರವರಿ 18 (ಕರ್ನಾಟಕ ವಾರ್ತೆ)

ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಗಳು, ಏಪ್ಯಾಟಿಕ್ ಕಟ್ಟಡ, ಎರಡನೇ ಮಹಡಿ, ಕೆಂಪೇಗೌಡ ರಸ್ತೆ, ಬೆಂಗಳೂರು – 560 009 ಹಾಗೂ ಖಾಸಗಿ ನಿಯೋಜಕರುಗಳ ಸಂಯುಕ್ತ ಆಶ್ರಯದಲ್ಲಿ ರಾಷ್ಟ್ರೀಯ ವೃತ್ತಿ ಸೇವಾ ಯೋಜನೆ (NCSP) ಅಡಿಯಲ್ಲಿ ನಿರುದ್ಯೋಗಿ ಯುವಕ/ಯುವತಿಯರಿಗೆ ನೇರ ಸಂದರ್ಶನಕ್ಕೆ ಅನುಕೂವಾಗುವಂತೆ ಫೆಬ್ರವರಿ 23 ರಂದು ಶನಿವಾರ ಪೂರ್ವಾಹ್ನ 10.00 ಗಂಟೆಯಿಂದ ಅಪರಾಹ್ನ 4.00 ಗಂಟೆಯವರೆಗೆ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕೆ.ಆರ್. ಪುರಂ ಬೆಂಗಳೂರು – 560 036 ಇಲ್ಲಿ "ಉದ್ಯೋಗ ಮೇಳ' ವನ್ನು ಹಮ್ಮಿಕೊಳ್ಳಲಾಗಿದೆ.

ಈ ಉದ್ಯೋಗ ಮೇಳದಲ್ಲಿ ಖಾಸಗಿ ವಲಯದ 50 ಕ್ಕೂ ಹೆಸರಾಂತ ಸಂಸ್ಥೆಗಳು ಭಾಗವಹಿಸುತ್ತಿದ್ದು, ವಿವಿಧ ತಾಂತ್ರಿಕ ಹಾಗೂ ತಾಂತ್ರಿಕೇತರ ಹುದ್ದೆಗಳಿಗೆ ಸ್ಥಳದಲ್ಲೇ ನೇರವಾಗಿ ಆಯ್ಕೆ ಮಾಡಲಿದ್ದಾರೆ.

ಅಕ್ಷರಸ್ಥರು, ಅರ್ಧದಲ್ಲಿಯೇ ಶಾಲೆ ಬಿಟ್ಟವರು ಹಾಗೂ ಎಸ್.ಎಸ್.ಎಲ್.ಸಿ. ಫೇಲ್/ ಪಾಸ್, ಪಿ.ಯು.ಸಿ, ಐ.ಟಿ.ಐ. ಡಿಪ್ಲೊಮೋ (ಎಲ್ಲಾ ಟ್ರೇಡ್‌ಗಳು), ಪದವೀಧರರು ಹಾಗೂ ಸ್ನಾತಕೋತ್ತರ ಪದವಿ ಹೊಂದಿದವರಿಗೆ ಉದ್ಯೋಗ ಅವಕಾಶಗಳು ಲಭ್ಯವಿದೆ. ಉದ್ಯೋಗಾಂಕ್ಷಿಗಳು ತಮ್ಮ ವೈಯಕ್ತಿಕ (ಬಯೋಡಾಟಾ) ವಿವರಗಳೊಂದಿಗೆ "ಉದ್ಯೋಗ ಮೇಳ' ದಲ್ಲಿ ಭಾವಹಿಸಿ ಉದ್ಯೋಗ ದೊರೆಯುವ ಸದಾವಕಾಶವನ್ನು ಸದುಪಯೋಗಪಡಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿ ಹಾಗೂ ವಿವರಗಳಿಗಾಗಿ ಈ ಕೆಳಗಿನ ದೂರವಾಣಿ ಸಂಖ್ಯೆ 22259351 / 22261184 / 22374582 / 22268846 / 25612375 ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಕೃಷಿ ಬೆಲೆ ಆಯೋಗದಲ್ಲಿ ಕೆಲಸ ನಿರ್ವಹಿಸಲು ಒಪ್ಪಂದದ ಮೇರೆಗೆ ಸಿಬ್ಬಂದಿ ನೇಮಕಾತಿ

ಬೆಂಗಳೂರು, ಫೆಬ್ರವರಿ 18 (ಕರ್ನಾಟಕ ವಾರ್ತೆ)

ಕೃಷಿ ಬೆಲೆ ಆಯೋಗಕ್ಕೆ ಅಗತ್ಯವಿರುವ ತಾಂತ್ರಿಕ ಹುದ್ದೆಗಳನ್ನು ಒಪ್ಪಂದದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಜಿಯನ್ನು ನಿಗದಿತ ನಮೂನೆಯಲ್ಲಿ ದಿನಾಂಕ: 03-03-2019 ರೊಳಗಾಗಿ ಸೀಲು ಮಾಡಿದ ಲಕೋಟೆಯಲ್ಲಿ ಮುದ್ದಾಂ/ನೋಂದಣಿ ಅಂಚೆ ಮೂಲಕ ಸಲ್ಲಿಸಬಹುದಾಗಿದೆ. ತಡವಾಗಿಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

ತಾಂತ್ರಿಕ ಸಲಹೆಗಾರರು : (Technical Consultant) ಕೃಷಿ ಅರ್ಥಶಾಸ್ತ್ರ ಅಥವಾ ಕೃಷಿ ಮಾರುಕಟ್ಟೆ ಅಥವಾ ಕೃಷಿ ಸಂಖ್ಯಾಶಾಸ್ತ್ರ ಅಥವಾ ಬೇಸಾಯ ಶಾಸ್ತ್ರ, ಕೃಷಿ ವಿಸ್ತರಣಾ ಅಥವಾ ಕೃಷಿ/ತೋಟಗಾರಿಕೆ ವಿಜ್ಞಾನ ಸಂಬಂಧಪಟ್ಟ ವಿಷಯಗಳಲ್ಲಿ ಪಿ.ಹೆಚ್.ಡಿ. ಪದವಿ ಹೊಂದಿ ಕನಿಷ್ಠ 5 ವರ್ಷಗಳ ಅನುಭವ ಅಥವಾ ಸ್ನಾತಕೋತ್ತರ ಪದವಿ ಹೊಂದಿದ್ದು 10 ವರ್ಷಗಳ ಅನುಭವ ಮುಂದುವರೆದ ಕಂಪ್ಯೂಟರ್ ಮಾಡೆಲ್‌ಗಳು/ಸಾಫ್ಟ್‌ವೇರ್‌ಗಳನ್ನು ಮೇಲಿನ ವಿಷಯಗಳಲ್ಲಿ ಬಳಸುವ ಜ್ಞಾನವಿರಬೇಕು. ಮಾಸಿಕ ರೂ. 50,000/- .ಪ್ರವಾಸ ಕಾಲದಲ್ಲಿ ರಾಜ್ಯ ಸರ್ಕಾರದ ನಿಯಮಾವಳಿ ಪ್ರಕಾರ ದಿನಭತ್ಯೆ.

ತಾಂತ್ರಿಕ ಸಹಾಯಕರು: (Technical Assistant) ಕೃಷಿ ಅರ್ಥಶಾಸ್ತ ಅಥವಾ ಕೃಷಿ ಸಂಖ್ಯಾಶಾಸ್ತ್ರ ಅಥವಾ ಕೃಷಿ ವಿಸ್ತರಣೆ ವಿಷಯಗಳಲ್ಲಿ ಸ್ನಾತಕೋತ್ತರ/ಪಿಎಚ್.ಡಿ. ಪದವಿ ಹೊಂದಿರುವವರು ಅಥವಾ ಎಂ.ಎ. ಅರ್ಥಶಾಸ್ತ್ರ ಪದವಿ ಹೊಂದಿದ್ದು ಕೃಷಿಗೆ ಸಂಬಂಧಿಸಿದ ಸಂಶೋಧನೆ/ಅಧ್ಯಯನ/ಕಾರ್ಯ ನಿರ್ವಹಿಸಿರುವ ಅನುಭವ ಹೊಂದಿರುವವರು ಜೊತೆಗೆ ಮುಂದುವರೆದ ಕಂಪ್ಯೂಟರ್ ಮಾಡೆಲ್/ಸಾಫ್ಟ್‌ವೇರ್‌ಗಳನ್ನು ಮೇಲಿನ ವಿಷಯಗಳಲ್ಲಿ ಬಳಸುವ ಜ್ಞಾನವಿರಬೇಕು. ಮಾಸಿಕ ರೂ. 25,000/- ಪ್ರವಾಸ ಕಾಲದಲ್ಲಿ ರಾಜ್ಯ ಸರ್ಕಾರದ ನಿಯಮಾವಳಿ ಪ್ರಕಾರ ದಿನಭತ್ಯೆ.

ಹೆಚ್ಚಿನ ವಿವರಗಳಿಗೆ ಕೃಷಿ ಇಲಾಖಾ website http://raitamitra.kar.nic.in ನಲ್ಲಿ ಮಾಹಿತಿ ಪಡೆಯಬಹುದು. ಅರ್ಜಿಗಳನ್ನು website ನಿಂದ Download ಮಾಡಿಕೊಂಡು ಭರ್ತಿಮಾಡಿದ ಅರ್ಜಿಯನ್ನು ದಿನಾಂಕ: 03-03-2019 ರಂದು ಸಂಜೆ 5.00 ಗಂಟೆ ಒಳಗಾಗಿ ಕರ್ನಾಟಕ ಕೃಷಿ ಬೆಲೆ ಆಯೋಗದ ಕಚೇರಿ, ಕೃಷಿ ಇಲಾಖಾ ಆವರಣ, ಶೇಷಾದ್ರಿ ರಸ್ತೆ, ಬೆಂಗಳೂರು ರವರೆಗೆ ತಲುಪಿಸುವುದು. ಲಕೋಟೆ ಮೇಲೆ ಅರ್ಜಿ ಸಲ್ಲಿಸುತ್ತಿರುವ ಹುದ್ದೆಯ ಹೆಸರನ್ನು ಕೆಂಪು ಶಾಯಿಯಲ್ಲಿ ಸ್ಪಷ್ಟವಾಗಿ ನಮೂದಿಸಿರಬೇಕು.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಕೃಷಿ ಬೆಲೆ ಆಯೋಗದ ಕಚೇರಿಯನ್ನು (ದೂರವಾಣಿ ಸಂಖ್ಯೆ 080-22074118/22115496) ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಅಂತಿಮ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ಫೆಬ್ರವರಿ 18 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಅಲ್ಪಸಂಖ್ಯಾತರ ನಿರ್ದೇಶನಾಲಯದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಗಣಿತ ಶಿಕ್ಷಕರು 21 (15 + 06 ಹೈ.ಕ.) ಹುದ್ದೆಗಳ ಅಂತಿಮ ಆಯ್ಕೆಪಟ್ಟಿಯನ್ನು ದಿನಾಂಕ: 13–02–2019 ರಂದು ಆಯೋಗದ ವೆಬ್‌ಸೈಟ್ www.kpsc.kar.nic.in ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

## ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಪಡೆದ ಅಂಕ ಅಂತರ್ಜಾಲದಲ್ಲಿ ಪ್ರಕಟ

ಬೆಂಗಳೂರು, ಫೆಬ್ರವರಿ 18 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ರಾಜ್ಯದ ಸಿವಿಲ್ ಸೇವೆಗಳಡಿಯಲ್ಲಿ ವಿವಿಧ 41 ಇಲಾಖೆಯಲ್ಲಿನ 851 ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳಿಗೆ ದಿನಾಂಕ: 11–02–2018 ರಂದು ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಪಡೆದಿರುವ ಅಂಕಗಳನ್ನು ದಿನಾಂಕ: 07–02–2009 ರಂದು ಆಯೋಗದ ಅಂತರ್ಜಾಲ ತಾಣದಲ್ಲಿ www.kpsc.kar.nic.in ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ ಎಂದು ಆಯೋಗದ ಪ್ರಕಟಣೆ ತಿಳಿಸಿದೆ.

## ಸಚಿವರ ಪ್ರವಾಸ

ಬೆಂಗಳೂರು, ಫೆಬ್ರವರಿ 18 (ಕರ್ನಾಟಕ ವಾರ್ತೆ)

ಕೃಷಿ ಸಚಿವ ಶ್ರೀ ಎನ್.ಹೆಚ್. ಶಿವಶಂಕರರೆಡ್ಡಿ ಅವರು ಫೆಬ್ರವರಿ 26 ರಿಂದ 28 ರವರೆಗೆ ಧಾರವಾಡ ಮತ್ತು ರಾಯಚೂರು ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳುವರು.

## ಡ್ರೋಣ್ ಉತ್ಸವ

ಬೆಂಗಳೂರು, ಫೆಬ್ರವರಿ 18 (ಕರ್ನಾಟಕ ವಾರ್ತೆ)

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಸರ್ಕಾರಿ ವೈಮಾನಿಕ ತರಬೇತಿ ಶಾಲೆ, ಜಕ್ಕೂರು ಇಲ್ಲಿ ಫೆಬ್ರವರಿ 18 ರಿಂದ 20 ರವರೆಗೆ ಡ್ರೋಣ್ ಉತ್ಸವ ಬೆಳಿಗ್ಗೆ 9 ರಿಂದ ಸಂಜೆ 5.30ರವರೆಗೆ ಆಯೋಜಿಸಿದೆ. ಇದರಲ್ಲಿ ಮಕ್ಕಳು ಹಾಗೂ ಯುವಜನರಲ್ಲಿ ಕ್ರೀಡೆಗಳ ಬಗ್ಗೆ ಅರಿವು ಮೂಡಿಸುವ ಸಲುವಾಗಿ ಕ್ರೀಡಾರೋಹಣ, ಹಾಕಿ, ಬಾಕ್ಸಿಂಗ್ ಮತ್ತು ಫೆನ್ಸಿಂಗ್ ಕ್ರೀಡೆಗಳನ್ನು ಪ್ರದರ್ಶಿಸಲಾಗುತ್ತಿದೆ. ಈ ಕ್ರೀಡೆಗಳು ಉಚಿತವಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬಹುದಾಗಿದೆ. ಹೆಚ್ಚಿನ ವಿವರಗಳಿಗೆ ರಾಜೇಂದ್ರ ಹಾಸಭಾವಿ 9448038220 ಇವರನ್ನು ಸಂಪರ್ಕಿಸಲು ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಅಕಾಡೆಮಿ ಪ್ರಕಟಣೆಯಲ್ಲಿ ತಿಳಿಸಿದೆ.